**<u>ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ ನ್ಯಾಯಾಲಯ ಕುಂದಗೋಳ</u>**

**<u>ಸಿಸಿ ನಂಃ 50/2016</u>**

**<u>ಸಿಡಬೂಃ15 ಪಿ ಡಬ್ಲ್ಯೂಃ14</u>**

**ಹೆಸರುಃ ಮಲ್ಲನಗೌಡ**

**ತಂದೆ ಹೆಸರುಃ ಶಂಕರಗೌಡ ತಿರಕನಗೌಡ್ರ**

**ವಯಸ್ಸುಃ 39 ವರ್ಷಗಳು.**

**ಉದ್ಯೋಗಃ ವ್ಯವಸಾಯ**

**ವಾಸ ಸ್ಥಳಃ ಬೂದಿಹಾಳ.**

**<u>ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋದಿಸಲಾಯಿತುಃ ದಿಃ 24.01.2025</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ</u>**

ಚಾಸಾಃ1 ರಿಂದ 9, 11, 14, 15, 23 ರಿಂದ 36 ರವರು ನನಗೆ ಗೊತ್ತಿಲ್ಲ. ಚಾಸಾಃ10, 12, 13, 14, 16, 17, 18, 19, 20, 21, 22 ರವರ ಪರಿಚಯ ಇದೆ. ನ್ಯಾಯಾಲಯದ ಮುಂದೆ ಇರುವ 1 ಮತ್ತು 2 ನೇ ಆರೋಪಿಗಳು ನನಗೆ ಗೊತ್ತಿಲ್ಲ, ನ್ಯಾಯಾಲಯದ ಮುಂದೆ ಈ ದಿನ 4 ಮತ್ತು 5 ನೇ ಆರೋಪಿಗಳು ಗೈರು ಹಾಜರಾಗಿದ್ದು, ಅವರ ಪರಿಚಯ ಇರುವುದಿಲ್ಲ ಎಂದು ತಿಳಿಸಿರುತ್ತಾರೆ. ಎಲ್ಲಾ ಆರೋಪಿತರು ತಮ್ಮ ಅಧಿಕಾರಿದ ಅವಧಿಯಲ್ಲಿ ಮರೇಗಾ ಯೋಜನೆಯಡಿಯಲ್ಲಿ ಸ್ವಲ್ಪ ಕೂಲಿಕಾರ್ಮಿಕರನ್ನು ತೆಗೆದುಕೊಂಡು ಬಹಳಷ್ಟು ಮರೇಗಾ ಯೋಜನೆ ಪಟ್ಟಿಗಳಲ್ಲಿ ಕೂಲಿಕಾರರನ್ನು ನಮೂದಿಸಿದ್ದು ಹಾಗೂ ಅವರ ಖೊಟ್ಟಿ ಸಹಿಗಳನ್ನು ಮಾಡಿ ಅವರ ಖಾತೆಗೆ ಬಂದ ಹಣವನ್ನು ತಮ್ಮ ಖಾತೆಗೆ ವರ್ಗಾವಣೆ ಮಾಡಿಕೊಳ್ಳುವ ಮೂಲಕ ಸರಕಾರಕ್ಕೆ ಹಾಗೂ ಕೂಲಿಕಾರರಿಗೆ ಮೋಸ ಹಾಗೂ ನಂಬಿಕೆ ದ್ರೋಹವನ್ನು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಈ ಪ್ರಕರಣದ ಕುರಿತು ಪೊಲೀಸರಿಗೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ</u>**

1. 2012 ಇಂಗಳಗಿ ಗ್ರಾಮ ಪಂಚಾಯತ ನಮ್ಮ ಊರು ಮತ್ತು ಇಂಗಳಗಿ

ಗ್ರಾಮ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೂಲಿಕಾರರಿಂದ ಹೊಸದಾಗಿ ರಸ್ತೆ ಮಾಡಿಸುವುದು ಮತ್ತು ರೈತರ ಹೊಲದಲ್ಲಿ ಕೃಷಿ ಹೊಂಡ ಮತ್ತು ಬದುಗಳನ್ನು ಹಾಕಿಸುವುದು, ಕೂಲಿಕಾರರಿಗೆ ಮತ್ತು ಕೂಲಿ ಹಣವನ್ನು ಅವರ ಬ್ಯಾಂಕುಗಳಲ್ಲಿ ಇದ್ದ ಉಳಿತಾಯ ಖಾತೆಗಳಿಗೆ ಜಮಾ ಮಾಡುವುದಾಗಿ ಪಂಚಾಯತ ನೌಕಾರರಾದ ಶಂಕ್ರಪ್ಪ ಸಂಗಣ್ಣನವರ ಮತ್ತು ಕಾರ್ಯದರ್ಶಿಯವರು ಹೇಳಿದ್ದರಿಂದ ಕೂಲಿಕಾರರ ಜನರಿಂದ ಬ್ಯಾಂಕಿನ ಪಾಸ್ ಬುಕ್ಕಗಳನ್ನು ಹಾಗೂ ನಂಬರಗಳನ್ನು ಕೊಟ್ಟು ಬಂದಿರುತ್ತಾರೆ ಎಂದರೆ ಸರಿಯಲ್ಲ. ನಾನು ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 7 ದಿನಗಳ ಕೆಲಸ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಹಿರೇಬೂದಿಹಾಳ ನೆಲಗುಡ್ಡ ಭೂಕೋಪ್ಪ ರಸ್ತೆ ಸುಧಾರಣಾ ಕೂಲಿ ಕೆಲಸಕ್ಕೆ ಕೂಲಿಯಂತೆ ಹೋಗಿದ್ದೆ ಎಂದರೆ ಸರಿಯಲ್ಲ. ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೂಲಿಕಾರ ಕೆಲಸ ಮಾಡಿದ ಹಾಜರಾತಿ ಪಟ್ಟಿಯನ್ನು ನೋಡಲಾಗಿ ಅದರ ಸಂಃ61426 ಇದ್ದು, ಹಿರೇಬೂದಿಹಾಳದಿಂದ ನೆಲಗುಡ್ಡ ತರ್ಲಘಟ್ಟ ರಸ್ತೆ ಸುಧಾರಣಾ ಮಾಡಿರುವ ಬಗ್ಗೆ ಕೂಲಿ ಕೆಲಸಗಾರರ ಪಟ್ಟಿಯಲ್ಲಿ ಕೆಲಸ ಮಾಡಿದ ಬಗ್ಗೆ ಚೆಕ್ಕು ನಂಃ172559ನ್ನು ದಿಃ24.02.2010 ರಂದು ಮೊತ್ತ 1,53,944/ ಇದ್ದು ಈ ಹಣವನ್ನು ಜಮಾ ಮಾಡಬೇಕು ಅಂತ ಬ್ಯಾಂಕಿಗೆ ಕೊಟ್ಟ ಲಿಸ್ಟನ್ನು ನೋಡಿದೆ ಎಂದರೆ ಸರಿಯಲ್ಲ. ಅ.ನಂಃ6ಕ್ಕೆ ನಾನು ನನ್ನ ಹೆಸರು ನಮೂದು ಮಾಡಿದ್ದು ಬ್ಯಾಂಕಿನ ಉಳಿತಾಯ ಖಾತೆ ನಂಬರ ನಮೂದಿ ರೂ 10,260 ಗಳನ್ನು ಜಮಾ ಮಾಡಲು ಬರೆದಿರುತ್ತಾರೆ ಎಂದರೆ ಸರಿಯಲ್ಲ. ಈ ಲಿಸ್ಟ ಹಾಗೂ ಚೆಕ್ಕಿನ ಮೇಲೆ ಪಂಚಾಯತಿ ಅಧ್ಯಕ್ಷರಾದ ನೀಲವ್ವ ಭದ್ರಾಪುರ ಹಾಗೂ ಎಮ್ ಎ ನದಾಫ ಕಾರ್ಯದರ್ಶಿ ಇವರ ಸಹಿಗಳು ಇದ್ದವು ಎಂದರೆ ಸರಿಯಲ್ಲ. ಈ ಹಣವು ಕೂಲಕಾರರಿಗೆ ಕೊಡುವ ಕೂಲಿ ಹಣ ನನ್ನ ಖಾತೆ ಜಮಾ ಆಗಿರುತ್ತದೆ, ನಾನು ದುಡಿದ ಕೂಲಿ ಹಣ ರೂ 700/ ಮುರಿದುಕೊಂಡು ಬಾಕಿ ಹಣವನ್ನು ಬ್ಯಾಂಕಿನಿಂದ ಪಡೆದು ಕೂಲಿಕಾರರಿಗೆ ಬಟವಡೆ ಮಾಡಲು ಕೊಡ್ರಿ ಅಂತ ಕಾರ್ಯದರ್ಶಿ ಹೇಳಿದ ಪ್ರಕಾರ ನಾನು ದಿಃ25.02.2010ರಂದು ರೂ 10,260/ ವನ್ನು ಬ್ಯಾಂಕಿನಿಂದ ಪಡೆದು ನನ್ನ ಕೂಲಿ ಹಣವನ್ನು ಮುರಿದು ರೂ 9,560/ ವನ್ನು ಕಾರ್ಯದರ್ಶಿ ಎಮ್ ಎ ನದಾಫ ಇವರಿಗೆ ಕೊಟ್ಟೆ ಎಂದರೆ ಸರಿಯಲ್ಲ. ನನ್ನ ಪಾಸ್ ಬುಕ್ಕನ ಪ್ರತಿಯನ್ನು ಸಹಿ ಮಾಡಿ ಮತ್ತು ಒಂದು ಬಿಳೆ ಹಾಳೆಯಲ್ಲಿ ನನ್ನ ಮಾದರಿ ಸಹಿಗಳನ್ನು ಮಾಡಿ ತಮ್ಮ ಕಡೆಗೆ ಇಟ್ಟುಕೊಂಡರು

ಎಂದರೆ ಸರಿಯಲ್ಲ.

ನನ್ನ ಹೆಸರಿಗೆ ಜಮಾ ಮಾಡಿದ ರೂ 9,560/ ಗಳನ್ನು ಕೂಲಿಕಾರರಿಗೆ ಕೊಡಬೇಕಾದ ಹಣ ಅಂತ ಕಾರ್ಯದರ್ಶಿ ಎಮ್ ಎ ನದಾಫ ಹಾಗೂ ಚೆಕ್ಕಿನ ಮೇಲೆ ಸಹಿ ಮಾಡಿದ ಅಧ್ಯಕ್ಷರಾದ ನೀಲವ್ವ ಭದ್ರಾಪುರ ಇವರು ಮೀಲಾಪೆಯಾಗಿ ನನ್ನಿಂದ ರೂ 9560/ ಪಡೆದು ಆ ಹಣವನ್ನು ತಮ್ಮ ಸ್ವಂತ ಲಾಭಕ್ಕಾಗಿ ನನ್ನ ಖಾತೆಗೆ ಬೇರೆ ಕೂಲಿಕಾರರಿಗೆ ಕೊಡಬೇಕಾದ ಹಣವನ್ನು ಪಡೆದುಕೊಂಡು ತಮ್ಮ ಸ್ವಂತಕ್ಕೆ ದುರುಪಯೋಗ ಮಾಡಿಕೊಂಡು ನನಗೆ ಮತ್ತು ಸರಕಾರಕ್ಕೆ ಹಾಗೂ ಕೂಲಿ ಕಾರ್ಮಿಕರಿಗೆ ಮೋಸ ಮತ್ತು ನಂಬಿಕೆ ದ್ರೋಹ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಎಲ್ಲಾ ಸಂಗತಿಗಳು ಗೊತ್ತಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಿಕೆಯನ್ನು ನಿಪಿಃ21 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೆ ಸರಿ ಇದೆ.**

Sd/-

**ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂ.ಗಳು**

**ಕುಂದಗೋಳ.**